3604 (4519) ಶ್ರೀ ರೇಣುಕಾಚಾರ್ಯ ಎಂ.ಪಿ. (ಹೊನ್ನಾಳ್ಳಿ) – ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊನ್ನಾಳಿ ತಾಲ್ಲೂಕಿನ ಸವಳಂಗ ಕೆರೆಗೆ ತುಂಗಾ ಏತನೀರಾವರಿ ಮೂಲಕ ನೀರಾವರಿ ಸೌಲಭ್ಯ ಕಲ್ಪಿಸುವ ವಿಚಾರ ಸರ್ಕಾರಕ್ಕೆ ಇದೆಯೇ ;

ಆ) ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು ;

ಇ) ಯೋಜನೆಯ ನೀಲಿ ನಕ್ಷೆ ತಯಾರಿಸಲಾಗಿದೆಯೇ; ವಿವರ ನೀಡುವುದು) ;

ಈ) ತಯಾರಿಸಲಾಗಿದ್ದಲ್ಲಿ ಪೂರ್ಣ ಮಾಹಿತಿ ನೀಡುವುದು ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು)–

ಅ) ಅನುಮೋದಿತ ತುಂಗಾ ಏತನೀರಾವರಿ ಯೋಜನೆಯಡಿಯಲ್ಲಿ ಹೊನ್ನಾಳಿ ತಾಲ್ಲೂಕಿನ ಸವಳಂಗ ಕೆರೆಗೆ ನೀರನ್ನು ಒದಗಿಸುವ ಪ್ರಸ್ತಾವನೆಯು ಇರುವುದಿಲ್ಲ.

ಆ) ಸವಳಂಗ ಕೆರೆಯು ತುಂಗಾ ಏತನೀರಾವರಿ ಯೋಜನೆಯ ವ್ಯಾಪ್ತಿಯಡಿ ಬಾರದೇ ಇರುವುದರಿಂದ 'ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ.

ಇ) ಅನುಮೋದಿತ ತುಂಗಾ ಏತನೀರಾವರಿ ಯೋಜನೆಯಲ್ಲಿ ಹೊನ್ನಾಳಿ ತಾಲ್ಲೂಕಿನ ಸವಳಂಗ ಕೆರೆಗೆ ನೀರು ಒದಗಿಸುವ ಪ್ರಸ್ತಾವನೆಯು ಇಲ್ಲದಿರುವ ಕಾರಣ ಈ ಯೋಜನೆಯ ನೀಲಿನಕ್ಷೆ ತಯಾರಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

3605 (3848) – ಶ್ರೀ ರೇವು ನಾಯಕ್ ಬೆಳಮಗಿ (ಕಮಲಾಪುರ)– ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆಯಲ್ಲಿರುವ ಬ್ರಿಡ್ಜ್ ಕಂ ಬ್ಯಾರೇಜ್ ಮತ್ತು ಬ್ಯಾರೇಜ್ ಎಷ್ಟಿವೆ ; (ತಾಲ್ಲೂಕು ಮತ್ತು ಕ್ಷೇತ್ರವಾರು ವಿವರ ನೀಡುವುದು);